**ಪತ್ರಿಕಾ ತುಣುಕುಗಳು**

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 23/1/21



ಡಿಸೆಂಬರ್ ತಿಂಗಳಲ್ಲಿ ವಿಧಾನಪರಿಷತ್‌ನಲ್ಲಿ ನಡೆದ ಅಹಿತಕರ ಘಟನೆಗೆ ಸಂಬಂಧಿಸಿದಂತೆ ರಚಿಸಲಾದ ಸಮಿತಿ ತನ್ನ ಮಧ್ಯಂತರ ವರದಿಯನ್ನು ಸಭಾಪತಿ ಪ್ರತಾಪಚಂದ್ರಶೆಟ್ಟಿ ಅವರಿಗೆ ಸಲ್ಲಿಸಿತು. ಈ ವೇಳೆ ಸಮಿತಿ ಅಧ್ಯಕ್ಷ ಮರಿತಿಬ್ಬೇಗೌಡ, ಸದಸ್ಯರಾದ ಬಿ.ಕೆ. ಹರಿಪ್ರಸಾದ್, ಆರ್.ಬಿ. ತಿಮ್ಮಾಪುರ ಉಪಸ್ಥಿತರಿದ್ದರು.

# ಮಾಧುಸ್ವಾಮಿ, ಅಶ್ವತ್ಥನಾರಾಯಣ ವಿರುದ್ಧ ಸದನ ಸಮಿತಿ ಶಿಫಾರಸು

23/1/21

ಸಂ.ಕ.ಸಮಾಚಾರ, ಬೆಂಗಳೂರು

ವಿಧಾನ ಪರಿಷತ್ ಅಧಿವೇಶನದಲ್ಲಿ ಕಳೆದ ಡಿಸೆಂಬರ್ 12ರಂದು ನಡೆದ ಅಹಿತಕರ ಘಟನೆಗೆ ಅಂದಿನ ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ, ಡಿಸಿಎಂ ಅಶ್ವತ್ಥ ನಾರಾಯಣ ಕಾರಣ ಎಂದು ಸದನ ಸಮಿತಿ ಮಧ್ಯಂತರ ವರದಿ ಶಿಫಾರಸು ಮಾಡಿದ್ದು ಕಾಂಗ್ರೆಸ್ ಸದಸ್ಯ ನಾಸಿರ್ ಅಹಮ್ಮದ್ ಸೇರಿದಂತೆ ಹಲವು ಕಾಂಗ್ರೆಸ್ ಸದಸ್ಯರ ವಿರುದ್ಧವೂ ದೋಷಾರೋಪ ಮಾಡಿದೆ.

ಮೇಲ್ಮನೆಯಲ್ಲಿ ನಡೆದ ಅಹಿತಕರ ಘಟನೆಯ ವಿಚಾರಣೆ ನಡೆಸಿ ವರದಿ ಸಲ್ಲಿಸಲು ರಚಿಸಲಾಗಿದ್ದ ವಿಧಾನ ಪರಿಷತ್ ಸದಸ್ಯ ಮರಿತಿಬ್ಬೇಗೌಡ ಅವರ ಅಧ್ಯಕ್ಷತೆಯ ಸದನ ಸಮಿತಿ ಇಂದು 84 ಪುಟಗಳ ಮಧ್ಯಂತರ ವರದಿಯನ್ನು ವಿಧಾನ ಪರಿಷತ್ ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ಅವರಿಗೆ ಸಲ್ಲಿಸಿತು. ಅಲ್ಲದೆ ಪೂರ್ಣ ಪ್ರಮಾಣದ ವರದಿ ಸಲ್ಲಿಸಲು ಕಾಲಾವಕಾಶ ಕೋರಿದೆ.




ವರದಿ ಸಲ್ಲಿಸಿದ ನಂತರ ಸಮಿತಿ ಅಧ್ಯಕ್ಷ ಮರಿತಿಬ್ಬೇಗೌಡ ಮಾತನಾಡಿ, ಸಮಿತಿಗೆ 20 ದಿನಗಳ ಕಾಲಾವಕಾಶ ನೀಡಲಾಗಿತ್ತು, ಈವರೆಗೆ ಸಮಿತಿ ಒಟ್ಟು ಐದು ಸಭೆಗಳನ್ನು ನಡೆಸಿದ್ದು, ಹೆಚ್ಚಿನ ಸಮಯವಾಕಾಶ ಬೇಕಾಗಿದೆ. ಆದ್ದರಿಂದ, ಸಮಿತಿಯ ಮೊದಲ ನಾಲ್ಕು ಸಭೆಗಳ ಮಾಹಿತಿಯನ್ನೊಳಗೊಂಡ ವರದಿ ಹಾಗೂ ಸಾಕ್ಷ್ಯದಾರಗಳನ್ನು ಸಿ.ಡಿ ರೂಪದಲ್ಲಿ ಮಧ್ಯಂತರ ವರದಿಯಲ್ಲಿ ಸಲ್ಲಿಸಲಾಗಿದೆ ಸಂಪೂರ್ಣ ವರದಿ ಸಲ್ಲಿಸಲು ಇನ್ನೂ ಹೆಚ್ಚಿನ ಸಮಯವಾಕಾಶ ಕೇಳಲಾಗುವುದು ಎಂದು ತಿಳಿಸಿದರು.

ಘಟನೆಯ ಕುರಿತು ಈವರೆಗೆ ನಡೆಸಿದ ಐದು ಸಭೆಗಳಲ್ಲಿ ಅಂದು ವಿಧಾನ ಪರಿಷತ್‌ನಲ್ಲಿ ಉಪಸ್ಥಿತರಿದ್ದ ವಿಧಾನ ಪರಿಷತ್ ಕಾರ್ಯದರ್ಶಿ, ಮಾರ್ಷಲ್ ಮತ್ತು ವಿಧಾನ ಪರಿಷತ್ ಸದಸ್ಯ ರಮೇಶ್ ಅವರಿಗೆ ನೋಟಿಸ್ ನೀಡಿ ಪ್ರಾಥಮಿಕ ಹೇಳಿಕೆ ಪಡೆಯಲಾಗಿದೆ. ಅಂದಿನ ಅಧಿವೇಶನದಲ್ಲಿ ಹಾಜರಿದ್ದು ಅಧಿವೇಶನದ ಕಲಾಪಗಳನ್ನು ಚಿತ್ರೀಕರಿಸಿರುವ ಖಾಸಗಿ ಸುದ್ದಿ ವಾಹಿನಿಗಳು, ವಿಧಾನ ಪರಿಷತ್‌ನ ವೆಬ್‌ಕಾಸ್ಟ್, ಲೋಕೋಪಯೋಗಿ ಇಲಾಖೆ ನಿರ್ವಹಿಸುವ ಸಿಸಿ ಕ್ಯಾಮೆರಾ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಘಟನೆ ಕುರಿತು ಮಾಹಿತಿ ಪಡೆಯುವ ಅಗತ್ಯವಿದೆ ಎಂದು ಸಮಿತಿ ತೀರ್ಮಾನಿಸಿದೆ. ಘಟನೆಯ ನಂತರ ನಡೆದ ಉಪ ಸಭಾಪತಿ ಧರ್ಮೇಗೌಡ ಅವರ ಸಾವಿನ ಕುರಿತು ಅವರು ಬರೆದಿಟ್ಟಿರು... ಎನ್ನಲಾಗಿರು... ಪತ್ರವನ್ನು ಒದ... ಕೋರಿ ಗೃಹ ಇಲಾಖೆಯ ಕಾಯ...ಗಳಿಗೆ ಸಹ ಪತ್ರ ಬರೆಯಲಾಗಿದೆ. ...ದ, 20 ದಿನಗಳ ಒಳಗಾಗಿ ಪೂರ್ಣ ...ಯನ್ನು ಸಲ್ಲಿಸಲು ಸಾಧ್ಯವಾಗುತ್ತಿಲ್ಲ ಎ...ು ಹೇಳಿದರು.

ವರದಿ ಸ್ವೀಕರಿಸಿದ ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ಮಾತನಾಡಿ, ಅಂದು ನಡೆದ ಅಹಿತಕರ ...ಟನೆ ಕುರಿತು ಐದು ಸದಸ್ಯರನ್ನೊಳಗೊಂ... ಸದನ ಸಮಿತಿಯನ್ನು ಸರ್ಕಾರ ರಚಿಸಿ ಆದೇಶ ಹೊರಡಿಸಿ... ಆದರೇ, ಅದರಲ್ಲಿ ಹೆಚ್.ವಿಶ್ವನಾಥ್ ಮತ್ತು ಸಂಕನ... ಅವರು ಖಾಸಗಿ ಕಾರಣಗಳಿಂದ ಸಮಿತಿಗೆ ರಾಜಿನಾಮೆ ನೀಡಿದ್ದು, ಪ್ರಸ್ತುತ ಸಮಿತಿಯಲ್ಲಿ 3 ಸದಸ್ಯರಿದ್ದಾರೆ. ಸ...ತಿಗೆ 20 ದಿನಗಳ ಒಳಗಾಗಿ ವರದಿಯನ್ನು ಸಲ್ಲಿಸಲು ಸೂ...ಸಲಾಗಿತ್ತು, ಸಮಿತಿಗೆ ಕಾಲಾವಕಾಶ ಸಾಕಾಗುತ್ತಿಲ್ಲವೆಂದು ಇಂದು ಮಧ್ಯಂತರ ವರದಿಯನ್ನು ಸಲ್ಲಿಸಿ ಹೆಚ್ಚಿನ ಸಮ...ವನ್ನು ಕೋರಿದೆ. ಸಮಿತಿ ಸಲ್ಲಿಸಿರುವ ಮಧ್ಯಂತರ ವರದಿ...ನ್ನು ಪರಿಶೀಲಿಸಿದ ನಂತರ ಮುಂದಿನ ಕ್ರಮದ ಬಗ್ಗೆ ...ೀಚಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸದನ ಸಮಿತಿಯ ಸದಸ್ಯರಾದ ಬಿ.ಕೆ.ಹರಿಪ್ರಸಾದ್ ಹಾಗೂ ಆರ್.ಬಿ.ತಿಮ್ಮಾಪುರ ಅವರು ಉಪಸ್ಥಿತರಿದ್ದರು.